ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ
ಬೆಂಗಳೂರು–01

ಸಂಖ್ಯೆ:ಸಿ 1(1)ಇತರೆ.ಶಿ//ಆ ಮೀಸಲಾತಿ(371ಜೆ) 62/2014–15

ದಿನಾಂಕ: 27–01–2015

## ಸುತ್ತೋಲೆ

ವಿಷಯ:–ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಸ್ಥಳಿಯ ವೃಂದಗಳ ರಚನೆ, ಹಂಚಿಕೆ ಮತ್ತು ವ್ಯಕ್ತಿಗಳ ವರ್ಗಾವಣೆ) ನಿಯಮಗಳು 2013ರಡಿಯಲ್ಲಿ ಸ್ಥಳೀಯ ವೃಂದ/ರಾಜ್ಯ ಮಟ್ಟದ ಸ್ಥಳೀಯ ವೃಂದಕ್ಕೆ ಸೇರಲು ಇಚ್ಚಿಸುವ ಜಿಲ್ಲಾ ದೈಹಿಕ ಶಿಕ್ಷಣ ಅಧಿಕಾರಿಗಳು ಹಾಗೂ ತತ್ಸಮಾನ ವೃಂದದ ಗ್ರೂಪ್ ಎ ಕಿರಿಯ ಶ್ರೇಣಿಯ ಅಧಿಕಾರಿಗಳಿಂದ ಅರ್ಜಿಯನ್ನು ಅಹ್ವಾನಿಸುವ ಬಗ್ಗೆ.

ಉಲ್ಲೇಖ:– 1.ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 06 ಪಿಎಲ್ಎಕ್ಸ್ 2012 ದಿ: 06.11.2013.
2.ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 43 ಹೆಚ್‌ಕೆಸಿ 2013 ದಿ:29.01.2014
3.ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ.61 ಡಿ.ಜಿ.ಎಮ್. 2014 ದಿನಾಂಕ 19–05–2014 ಮತ್ತು 21–11–2014

–***–

ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ 2013ರ ಅಧಿಸೂಚನೆಯ ಕಂಡಿಕೆ 13 ಮತ್ತು ಕಂಡಿಕೆ–3(2) ಹಾಗೂ 8 ಅನ್ವಯ ಸಾರ್ವಜನಿಕ ಶಿಕ್ಷಣ ಇಲಾಖೆಯ ರಾಜ್ಯ ಮಟ್ಟದ ಕಛೇರಿಗಳಲ್ಲಿನ ಜಿಲ್ಲಾ ದೈಹಿಕ ಶಿಕ್ಷಣ ಅಧಿಕಾರಿಗಳು ಹಾಗೂ ತತ್ಸಮಾನ ಹುದ್ದೆಗಳಲ್ಲಿ ಹೈದರಬಾದ್–ಕರ್ನಾಟಕ ಪ್ರದೇಶ ವ್ಯಾಪ್ತಿಯ ಸ್ಥಳೀಯ ವ್ಯಕ್ತಿಗಳಿಗೆ ಲಭ್ಯವಿರುವ ರಾಜ್ಯ ಮಟ್ಟದ ಸ್ಥಳೀಯ ವೃಂದದ ಶೇ.8ರಷ್ಟು ಹುದ್ದೆಗಳನ್ನು ಹಾಗೂ ಹೈದರಾಬಾದ್ ಕರ್ನಾಟಕ ಪ್ರದೇಶ ವ್ಯಾಪ್ತಿಯ ಸ್ಥಳೀಯ ವ್ಯಕ್ತಿಗಳಿಗೆ ಲಭ್ಯವಿರುವ ಸ್ಥಳೀಯ ವೃಂದದ ಶೇ 75%ರಷ್ಟು ಹುದ್ದೆಗಳನ್ನು ಮೀಸಲಿರಿಸಿ ಉಲ್ಲೇಖ–3ರಲ್ಲಿ ಅಧಿಸೂಚನೆ ಹೊರಡಿಸಲಾಗಿದೆ. ಸದರಿ ಅಧಿಸೂಚನೆಯನ್ನು ಇಲಾಖೆಯ ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಸ್ಥಳಿಯ ವೃಂದಗಳ ರಚನೆ, ಹಂಚಿಕೆ ಮತ್ತು ವ್ಯಕ್ತಿಗಳ ವರ್ಗಾವಣೆ) ನಿಯಮಗಳು, 2013ರ ಅಧ್ಯಾಯ 4ರ ನಿಯಮ 6ರಂತೆ ಸ್ಥಳಿಯ ವ್ಯಕ್ತಿಗಳ ಮಾನದಂಡವನ್ನು ಪೂರೈಸುವ ಮತ್ತು ಆ ವೃಂದವನ್ನು ಸೇರಲು ಇಚ್ಚಿಸುವ ನೌಕರರು ಅನುಬಂಧ–ಸಿ ಯಲ್ಲಿ ನಿರ್ದಿಷ್ಟಪಡಿಸಿದ ನಮೂನೆಯಲ್ಲಿ 45 ದಿನಗಳ ಒಳಗಾಗಿ ಅಯ್ಕೆಯನ್ನು ಚಲಾಯಿಸಲು ಅರ್ಜಿಯನ್ನು ಅಹ್ವಾನಿಸಲಾಗಿದೆ. ಅರ್ಹ ನೌಕರರು ಈ ಸುತ್ತೋಲೆಯ ದಿನಾಂಕದಿಂದ 45 ದಿನಗಳಲ್ಲಿ ತಮ್ಮ ಆಯ್ಕೆಯನ್ನು ಚಲಾಯಿಸಲು ತಿಳಿಸಿದೆ. ಅಧಿಕಾರಿಗಳು ನಿಗಧಿತ ಅವಧಿಯಲ್ಲಿ ಆಯ್ಕೆಯನ್ನು ಚಲಾಯಿಸದಿರುವ ಸಂದರ್ಭದಲ್ಲಿ ಸ್ಥಳೀಯ ವೃಂದವನ್ನು ಸೇರಲು ಇಚ್ಚೆ ಹೊಂದಿಲ್ಲವೆಂದು ಭಾವಿಸಲಾಗುವುದು.

(ಮೊಹಮ್ಮದ್ ಮೊಹಸಿನ್)
ಆಯುಕ್ತರು

ಇವರಿಗೆ:–

1 ಸ್ಥಳಿಯ ವ್ಯಕ್ತಿಗಳ ಮಾನದಂಡವನ್ನು ಪೂರೈಸುವ ಮತ್ತು ಆ ವೃಂದವನ್ನು ಸೇರಲು ಇಚ್ಚಿಸುವ ಅಧಿಕಾರಿಗಳು
2 ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರು.
3 ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹ ನಿರ್ದೇಶಕರು.
4 ಸಾರ್ವಜನಿಕ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು (ಆಡಳಿತ)
5 ರಾಜ್ಯದ ಎಲ್ಲಾ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಉಪ ನಿರ್ದೇಶಕರು (ಅಭಿವೃದ್ಧಿ)
6 ರಾಜ್ಯದ ಎಲ್ಲಾ ದೈಹಿಕ ಶಿಕ್ಷಣ ಅಧಿಕಾರಿಗಳು.

ಪ್ರತಿಗಳು:-

1 ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ ಬಹುಮಹಡಿ ಕಟ್ಟಡ, ಬೆಂಗಳೂರು. ರವರಿಗೆ ಗೌರವ ಪೂರ್ವಕವಾಗಿ

2. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಕರ್ನಾಟಕ, ಬೆಂಗಳೂರು.

3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.

4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ

5. ರಾಜ್ಯ ಯೋಜನಾ ನಿರ್ದೇಶಕರು, ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ, ಕರ್ನಾಟಕ, ಬೆಂಗಳೂರು.

6. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು

7. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು.

8. ಹಿರಿಯ ಸಹಾಯಕ ನಿರ್ದೇಶಕರು, ಇ ಆಡಳಿತ ಘಟಕ, (ಇಲಾಖೆಯ ವೆಬ್ ಸೈಟ್‌ನಲ್ಲಿ ಪ್ರಕಟಿಸಲು)

9. ಕಛೇರಿ ಪ್ರತಿ.